# ಕರ್ನಾಟಕ ವಿಧಾನ ಪರಿಷತ್ತು.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 330
ಸದಸ್ಯರ ಹೆಸರು : ಶ್ರೀ ಎನ್. ರವಿಕುಮಾರ್
(ವಿಧಾನ ಸಭೆಯಿಂದ ಚುನಾಯಿತರಾದವರು)

ಉತ್ತರಿಸುವ ಸಚಿವರು : ಕಂದಾಯ ಸಚಿವರು
ಉತ್ತರಿಸುವ ದಿನಾಂಕ : 13.08.20205

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಕಂದಾಯ ಇಲಾಖೆಯು ಬೆಂಗಳೂರು ಉತ್ತರ, ಉತ್ತರ ಉಪ ವಿಭಾಗಾಧಿಕಾರಿಯಾಗಿ ದಿನಾಂಕ: 26.03.2020 ರಿಂದ 26.06.2020ರ ವರೆಗೆ ಕರ್ತವ್ಯ ನಿರ್ವಹಿಸಿದ ಅಂದಿನ ಉಪ ವಿಭಾಗಾಧಿಕಾರಿಯಾಗಿ ಸರ್ಕಾರಿ ಗೋಮಾಳದ ಜಮೀನುಗಳಿಗೆ ಸಂಬಂಧಿಸಿದಂತೆ ಹೊರಡಿಸಿರುವ ಆದೇಶಗಳು; ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ಕುರಿತು ಕೈಗೊಂಡ ಕ್ರಮಗಳೇನು; (ವಿವರ ನೀಡುವುದು) | ಶ್ರೀ ಕೆ. ರಂಗನಾಥ್, ಉಪ ವಿಭಾಗಾಧಿಕಾರಿ, ಬೆಂಗಳೂರು ಉತ್ತರ ಉಪ ವಿಭಾಗ ಇವರು ಬೆಂಗಳೂರು ಉತ್ತರ ಉಪ ವಿಭಾಗ, ಬೆಂಗಳೂರು ಹುದ್ದೆಯಲ್ಲಿ ದಿನಾಂಕ:26.03.2020 ರಿಂದ 26.06.2020ರ ವರೆಗೆ ಕರ್ತವ್ಯ ನಿರ್ವಹಿಸುತ್ತಿದ್ದ ಅವಧಿಯಲ್ಲಿ ಗೋಮಾಳ/ಸರ್ಕಾರಿ/ಮಂಜೂರಾದ ಜಮೀನಿಗೆ ಸಂಬಂಧಿಸಿದಂತೆ ಮೂಲ ಮಂಜೂರಾತಿ ದಾಖಲೆಗಳ ನೈಜತೆ ಪರಿಶೀಲನೆ ಮಾಡದೇ ಸಂಬಂಧಪಟ್ಟ ತಹಶೀಲ್ದಾರ್‌ರವರಿಂದ ವರದಿ ಪಡೆಯಲು ಯಾವುದೇ ಕ್ರಮವಹಿಸದೇ ಸರ್ಕಾರಿ ಗೋಮಾಳದ ಜಮೀನುಗಳಿಗೆ ಸಂಬಂಧಿಸಿದಂತೆ ಹೊರಡಿಸಿರುವ ಆದೇಶಗಳು ಸರ್ಕಾರದ ಗಮನಕ್ಕೆ ಬಂದಿರುತ್ತದೆ.<br><br>ಈ ಸಂಬಂಧ ಸದರಿ ಅಧಿಕಾರಿಯವರನ್ನು ಸೇವೆಯಿಂದ ಅಮಾನತ್ತುಗೊಳಿಸುವಂತೆ ಸಿಬ್ಬಂದಿ & ಆಡಳಿತ ಸುಧಾರಣೆ ಇಲಾಖೆಗೆ ಶಿಫಾರಸ್ಸು ಮಾಡಲಾಗಿರುತ್ತದೆ. ಅದರಂತೆ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯು ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ 65 ಕೆಇವಿ 2020, ದಿನಾಂಕ:11.03.2022ರಂತೆ ಸದರಿ ಅಧಿಕಾರಿಯ ವಿರುದ್ಧ ಶಿಸ್ತು ಕ್ರಮ ಬಾಕಿಯಿರಿಸಿ ಸರ್ಕಾರಿ ಸೇವೆಯಿಂದ ಅಮಾನತ್ತುಗೊಳಿಸಿ ಆದೇಶಿಸಿರುತ್ತದೆ. ತದನಂತರ, ದಿನಾಂಕ:15.03.2024ರಲ್ಲಿ ಸದರಿಯವರ ಅಮಾನತ್ತನ್ನು ತೆರವುಗೊಳಿಸಿ ಸೇವೆಗೆ ಪುನರ್ ಸ್ಥಾಪಿಸಿ ಆದೇಶಿಸಲಾಗಿದೆ. ಪ್ರಸ್ತುತ ಇಲಾಖಾ ವಿಚಾರಣೆ ಬಾಕಿಯಲ್ಲಿರುತ್ತದೆ. |
| (ಆ) | ಕಂದಾಯ ಇಲಾಖೆಯ ಬೆಂಗಳೂರು ಉತ್ತರ ವಿಭಾಗದ, ಅಕ್ರಮ ಆರ್. ಎ ಪ್ರಕರಣಗಳ ವಿಚಾರಣೆಯನ್ನು ನಡೆಸಿರುವ ಬಗ್ಗೆ, ಅಂದಿನ ಕಂದಾಯ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ತನಿಖೆ ಮಾಡಿ ಮಾನ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ, ಇವರಿಗೆ ಅಕ್ರಮದ ಬಗ್ಗೆ ವರದಿ ಸಲ್ಲಿಸಿದ್ದು, ಇದುವರೆಗೂ ಕಂದಾಯ ಇಲಾಖೆಯ ಪ್ರಧಾನ ಕಾರ್ಯದರ್ಶಿಯವರ ವರದಿಯ ಮೇಲೆ ಕ್ರಮ ಕೈಗೊಳ್ಳದಿರಲು ಕಾರಣವೇನು; ಸದರಿ ವರದಿಯ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು; (ವಿವರ ನೀಡುವುದು) | |
| (ಇ) | ಕಂದಾಯ ಇಲಾಖೆಯ ಬೆಂಗಳೂರು ಉತ್ತರ ವಿಭಾಗದ, ದಿನಾಂಕ: 26.03.2020 ರಿಂದ 26.06.2020ರ ವರೆಗೆ ಕರ್ತವ್ಯ ನಿರ್ವಹಿಸಿದ ಅಂದಿನ ಉತ್ತರ ವಿಭಾಗಾಧಿಕಾರಿಯವರು ದಿನಾಂಕ: 24.03.2020 ರಿಂದ 03.05.2020ರವರೆಗೆ ಕರೋನಾ ವೈರಸ್ ನಿಯಂತ್ರಣ ಸಂಬಂಧ ಲಾಕ್‌ಡೌನ್ ಸಮಯದಲ್ಲಿ ಆರ್. ಎ ಪ್ರಕರಣಗಳನ್ನು ವಿಚಾರಣೆಯನ್ನು ನಡೆಸಿ ಹೊರಡಿಸಿದ ಆದೇಶಗಳ ಅನ್ವಯ ಎಷ್ಟು ಎಕರೆ ಭೂಮಿ ಪರಭಾರೆಯಾಗಿದೆ? (ವಿವರ ನೀಡುವುದು) | ಬೆಂಗಳೂರು ಉತ್ತರ ವಿಭಾಗದಲ್ಲಿ ದಿನಾಂಕ: 26.03.2020 ರಿಂದ 26.06.2020ರ ವರೆಗೆ ಕರೋನಾ ವೈರಸ್ ನಿಯಂತ್ರಣ ಸಂಬಂಧ ಲಾಕ್‌ಡೌನ್ ಸಮಯದಲ್ಲಿ ಆರ್. ಎ. ಪ್ರಕರಣಗಳನ್ನು ವಿಚಾರಣೆ ನಡೆಸಿ ಒಟ್ಟು 14 ಪ್ರಕರಣಗಳಲ್ಲಿ ಆದೇಶ ಹೊರಡಿಸಿದ್ದು, ಈ ಪ್ರಕರಣಗಳ ಕಡತಗಳನ್ನು ಪರಿಶೀಲನೆಗಾಗಿ ದಿನಾಂಕ: 25.03.2020ರಂದು ಪ್ರಾದೇಶಿಕ ಆಯುಕ್ತರು, ಬೆಂಗಳೂರು ವಿಭಾಗ, ಬೆಂಗಳೂರು ಇವರಿಗೆ ಸಲ್ಲಿಸಲಾಗಿರುತ್ತದೆ. ಸದರಿ ಪ್ರಕರಣಗಳಿಗೆ ಸಂಬಂಧಪಟ್ಟಂತೆ ಯಾವುದೇ ಜಮೀನು ಪರಭಾರೆಯಾಗಿರುವುದು ಕಂಡುಬಂದಿರುವುದಿಲ್ಲ. |

**ಸಂ: ಕಂಇ 141 ಟಿಆರ್‌ಎಂ 2025** (1870525)

**(ಕೃಷ್ಣ ಬೈರೇಗೌಡ)**
ಕಂದಾಯ ಸಚಿವರು